33 Sri Neelakantaiah Son Reply awaited 16-08-91

ವಿಷಯ: ಶಾಲೆಗಳಲ್ಲಿ "ಡಿ"ಗುಂಪಿನ ನೌಕರರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1554 (2126)

ಶ್ರೀ ಶಿವಶೇಖರಪ್ಪಗೌಡ, ಶಿರವಾಳ (ಶಹಾಪುರ):- ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ.

ಅ ಹೈದರಾಬಾದ್ ಕರ್ನಾಟಕ ಭಾಗದಲ್ಲಿ ಪ್ರೌಢಶಾಲೆ ಹಾಗೂ ಪ್ರಾಥಮಿಕ ಶಾಲೆಗಳಲ್ಲಿ ಎಡು ಗುಂಪಿನ ನೌಕರರು ನಿವೃತ್ತರಾದ ನಂತರ ಸದರಿ ಹುದ್ದೆಗಳನ್ನು ಭರ್ತಿ ಮಾಡದಿರುವುದು ನಿಜವಲ್ಲವೆ.

ಆ ಇದರಿಂದ ಶಾಲೆಗಳಿಗೆ ತೊಂದರೆಯಾಗಿದೆಯೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೆ.

ಇ ಈಗಲಾದರೂ ಸರ್ಕಾರದವರು ಶಾಲೆಗಳಿಗೆ "ಡಿ" ಗುಂಪಿನ ನೌಕರರನ್ನು ನೇಮಕ ಮಾಡುವ ಮೂಲಕ ಮೇಲ್ಕಂಡ ಶಾಲೆಗಳಿಗಾಗುತ್ತಿರುವ ತೊಂದರೆಯನ್ನು ತಪ್ಪಿಸುವರೇ?

ಶ್ರೀ ಎಂ.ವೀರಪ್ಪ ಮೊಯಿಲಿ, (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳಸಚಿವರು)

ಅ ಆರ್ಥಿಕ ಮಿತವ್ಯಯ ಜಾರಿಯಲ್ಲಿರುವುದರಿಂದ ಬೋದಕೇತರ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶವಿಲ್ಲವಾದ್ದರಿಂದ ರಾಜ್ಯದ ಯಾವುದೇ ಭಾಗದಲ್ಲಿನ ಗ್ರೂಪ್ "ಡಿ" ನೌಕರರ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶವಿರುವುದಿಲ್ಲ.

ಆ ಅನುಕಂಪದ ಆಧಾರದ ಮೇಲೆ ಗ್ರೂಪ್ "ಡಿ" ನೌಕರರ ಹುದ್ದೆಗಳನ್ನು ಭರ್ತಿ ಮಾಡಲಾಗುತ್ತಿರುವುದರಿಂದ ಶಾಲೆಗಳಿಗೆ ತೊಂದರೆಯಾಗಿಲ್ಲ.

ಇ (2)ರಲ್ಲಿನ ಉತ್ತರದಿಂದಾಗಿ ಉದ್ಭವಿಸುವುದಿಲ್ಲ.

ಛೇರ್ಮನ್:- ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಪಟ್ಟಿಯನ್ನು ಮಂಡಿಸಲಾಯಿತು.

334ನೇ ನಿಯಮದ ಮೇರೆಗೆ.

ವಿಷಯ: ಶಿವಮೊಗ್ಗ ಜಿಲ್ಲೆಯ ಶಿಕಾರಿಪುರ ತಾಲ್ಲೂಕಿನ ಹಳ್ಳಿಗಳಿಗೆ ಏತ ನೀರಾವರಿ ಸೌಲಭ್ಯಗಳನ್ನು ಒದಗಿಸುವ ಬಗ್ಗೆ.

ಶ್ರೀ ಟಿ. ಜಿ. ಜಯಚಂದ್ರ (ಕಳ್ಳಂಬೆಳ್ಳ):- ಮಾನ್ಯ ಅಧ್ಯಕ್ಷರೇ, ಶಿವಮೊಗ್ಗ ಜಿಲ್ಲೆಯ ಶಿಕಾರಿಪುರ ತಾಲ್ಲೂಕಿನ ಅಂಬಾಕೊಪ್ಪ, ಕುದರೆ ಹೊಸೂರು, ಸುರಗಿಹಳ್ಳಿ,ಹಾರ್ನಳ್ಳಿ ಮತ್ತು ತಂಬಿನ ಕಟ್ಟೆ ಗ್ರಾಮಸ್ಥರು ಸುಮಾರು 10-15 ವರ್ಷಗಳಿಂದ ಬರಗಾಲ ಅನುಭವಿಸುತ್ತಾ ಬಂದಿರುತ್ತಾರೆ. ಈ ಗ್ರಾಮಗಳ ಪಕ್ಕದಲ್ಲಿಯೇ ಹರಿಯುವ ಕುಮದ್ವತಿ ನದಿಗೆ ಏತ ನೀರಾವರಿ ಮಾಡಿ ಹತ್ತಿರವಿರುವ ಕೊಪ್ಪದ ಕೆರೆಗೆ ನೀರನ್ನು ತುಂಬುವಂತೆ ಮಾಡಿದಲ್ಲಿ ಬೇಸಿಗೆಯಲ್ಲೂ ಸಹ ಮೇಲ್ಕಂಡ 5 ಗ್ರಾಮಗಳ ಸಾವಿರಾರು ಎಕರೆ ಜಮೀನು ನೀರಾವರಿಯಾಗುತ್ತದೆ. ಇವರು ಅನೇಕ ಬಾರಿ ಮನವಿಯನ್ನು ಸಲ್ಲಿಸಿದ್ದರೂ ಸಹ ಇದರ ಬಗ್ಗೆ ಸರ್ಕಾರವು ಯಾವುದೇ ಕ್ರಮ ಕೈಗೊಂಡಿರುವುದಿಲ್ಲ. ಈ ದಿಸೆಯಲ್ಲಿ ಸದರಿ ಹಳ್ಳಿಗಳ ಜನತೆಯು ಮುಷ್ಕರ ಹೂಡಿರುವುದನ್ನು ಸದನದ ಗಮನಕ್ಕೆ ಹಾಗೂ ಸಂಬಂಧಪಟ್ಟ ಮಂತ್ರಿಗಳ ಗಮನಕ್ಕೆ ತರಬಯಸುತ್ತೇನೆ.

ಶ್ರೀ ಕೆ.ಎಸ್.ಮಲ್ಲಿಕಾರ್ಜುನ ಪ್ರಸನ್ನ:- (ಸಣ್ಣ ನೀರಾವರಿ ರಾಜ್ಯಸಚಿವರು) ಮಾನ್ಯ ಅಧ್ಯಕ್ಷರೇ, ಈ ವಿಚಾರದಲ್ಲಿ ನಾನು ಮಾನ್ಯ ಶಾಸಕರ ಹತ್ತಿರ ಪ್ರತ್ಯೇಕವಾಗಿ ಮಾತನಾಡಿ ಏನು ಸಮಸ್ಯೆ ಇದೆ ಅದನ್ನು ಬಗೆಹರಿಸುತ್ತೇನೆನ್ನುವ ಮಾತನ್ನು ಹೇಳುತ್ತೇನೆ.

ವಿಷಯ:- ಮಲ್ಲೇಶ್ವರ, ಯಶವಂತಪುರ, ರಾಜಾಜಿನಗರಗಳಿಂದ ಶಿವಾಜಿನಗರಕ್ಕೆ ಹೋಗುವ ಬಸ್ಸುಗಳ ಮಾರ್ಗವನ್ನು ಬದಲಿಸುವ ಬಗ್ಗೆ.

ಶ್ರೀ ರಾಮಲಿಂಗರೆಡ್ಡಿ (ಜಯನಗರ):- ಮಾನ್ಯ ಅಧ್ಯಕ್ಷರೇ ಈಗ ಮಲ್ಲೇಶ್ವರ, ಯಶವಂತಪುರ,